ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 08 ನೇ ಡಿಸೆಂಬರ್, 2020

ಸರ್ಕಾರಿ ಮತ್ತು ಅರಣ್ಯ ಪ್ರದೇಶವನ್ನು ಅತಿಕ್ರಮಣ ಗಣಿಗಾರಿಕೆ ಮಾಡುತ್ತಿರುವ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

102 (162) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ ಜಿಲ್ಲೆ, ವ್ಯಾಪ್ತಿಯಲ್ಲಿ ಗಣಿಗಾರಿಕೆ ನಡೆಯುತ್ತಿರುವ ಪ್ರದೇಶಗಳಲ್ಲಿ ಸರ್ಕಾರಿ ಮತ್ತು ಅರಣ್ಯ ಪ್ರದೇಶವನ್ನು ಅತಿಕ್ರಮಿಸಿ ಗಣಿಗಾರಿಕೆ ಮಾಡುತ್ತಿರುವ ಪ್ರಕರಣಗಳೆಷ್ಟು ; ಇಂತಹ ಪ್ರಕರಣಗಳಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ನಾಗಮಂಗಲ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಸರ್ಕಾರಿ ಮತ್ತು ಅರಣ್ಯ ಪ್ರದೇಶವನ್ನು ಅತಿಕ್ರಮಿಸಿ ಗಣಿಗಾರಿಕೆ ಮಾಡುತ್ತಿರುವ ಪ್ರಕರಣಗಳಲ್ಲಿ ಎಷ್ಟು ಪ್ರಕರಣಗಳಿಗೆ ಈವರೆಗೆ ದಂಡ ವಿಧಿಸಲಾಗಿದೆ ; (ಪ್ರತಿಗಳನ್ನು ನೀಡುವುದು)

(ಇ) ಅತಿಕ್ರಮಣ ಮಾಡಿರುವ ಪ್ರದೇಶವನ್ನು ಸರ್ಕಾರ ಹಿಂದಕ್ಕೆ ಪಡೆಯಲು ತೆಗೆದುಕೊಂಡ ಕ್ರಮಗಳೇನು ; ತಪ್ಪಿತಸ್ಥ ಇಲಾಖಾಧಿಕಾರಿಗಳು ಮತ್ತು ಗಣಿಗಾರಿಕೆ ನಡೆಸುತ್ತಿರುವವರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ? (ಸಂಪೂರ್ಣ ವಿವರ ನೀಡುವುದು)